**ಹಿರಿಯ ಶ್ರೇಣಿ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೇವದುರ್ಗ.**

**CC No.255/2020**

**PW-2 CW-3**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ಆದೆಪ್ಪ ತಂದೆ ಶಿವಣ್ಣ |
| ವಯಸ್ಸು | ಃ | 43 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ವಂದಲಿ |
| ಪ್ರಮಾಣಿಕರಿಸಿದ ದಿನಾಂಕ | ಃ | 05-01-2024 |

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ.**

ಸಾಕ್ಷಿಗೆ ಈಗ ನಿಪಿ-1 ನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಹೆಬ್ಬೆಟ್ಟಿನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ನಾನು ಮನೆಯಲ್ಲಿದ್ದೆ ಆಗ ಜೋರಾಗಿ ಮಾತನಾಡುವ ಶಬ್ದ ನನಗೆ ಕೇಳಿಸಿದ್ದು ಹೊರಗೆ ಹೋಗಿ ನೋಡುವಷ್ಟರಲ್ಲಿ ಜಗಳ ಆಗಿತ್ತು. ನಾನು ಜಗಳ ಬಿಡಿಸಿ ಕಳಿಸಿರುತ್ತೇನೆ. ನಾನು ನಿಪಿ-1 ಕ್ಕೆ ಹೆಬ್ಬೆಟ್ಟಿನ ಸಹಿಯನ್ನು ಚಾಸಾ-5 ರವರ ಮನೆಯಲ್ಲಿ ಮಾಡಿರುತ್ತೇನೆ. ನಾನು ಈ ರೀತಿಯಾಗಿ 4 ವರ್ಷಗಳ ಹಿಂದೆ ಸಹಿ ಮಾಡಿರುತ್ತೇನೆ. ಜಗಳ ಆದ ಒಂದು ವಾರದ ನಂತರ ಪೊಲೀಸರು ಪಂಚನಾಮೆಯನ್ನು ಮಾಡಿರುತ್ತಾರೆ. ಪಂಚನಾಮೆಯನ್ನು ಬೆಳಿಗ್ಗೆ 9-00 ರಿಂದ ಮಾಡಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಸ್.ಜಿ ವಕೀಲರಿಂದ.**

ಆರೋಪಿತರು ಜಗಳ ಆಡುವುದನ್ನು ನಾನು ನೋಡಿಲ್ಲ. ಸ್ಥಳದಲ್ಲಿ ಏನು ಆಗಿರುತ್ತದೆ ನನಗೆ ಗೊತ್ತಿಲ್ಲ. ನಿಪಿ-1 ಕ್ಕೆ ಸಹಿ ಮಾಡಬೇಕು ಎಂದು ಹೇಳಿದ್ದರಿಂದ ಸಹಿ ಮಾಡಿರುತ್ತೇನೆ. ನಿಪಿ-1 ರಲ್ಲಿ ಏನು ಬರೆಯಲಾಗಿದೆ ಗೊತ್ತಿಲ್ಲ. ಯಾವುದೇ ಜಗಳ ಆಗಿರುವುದಿಲ್ಲ ಪೊಲೀಸರು ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಫಿರ್ಯಾದಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.